ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಲೀಂ ಅಹ್ಮದ್ ಇವರು ನಿಯಮ-330ರಡಿ ಮಂಡಿಸಿರುವ ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಹೇಳಿಕೆ.

ವಿಷಯ:- " ಮಹಿಳಾ ಮತ್ತು ಮಕ್ಕಳ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತರು ಹಾಗೂ ಸಹಾಯಕರುಗಳು ಸರ್ಕಾರವು ಜಾರಿಗೊಳಿಸುವ ಕಲ್ಯಾಣ ಕಾರ್ಯಕ್ರಮಗಳ ಅನುಗುಣವಾಗಿ ಇಂದಿನ ಮಕ್ಕಳೇ ಭಾರತದ ಭವಿಷ್ಯ ಎಂಬ ದೂರದೃಷ್ಟಿ ಆಶಯದ ಹಿನ್ನಲೆಯಲ್ಲಿ ಮಕ್ಕಳ ಆರೋಗ್ಯ, ಪೌಷ್ಠಿಕ ಆಹಾರ, ಲಾಲನೆ-ಪಾಲನೆ ಮಾಡುವ ಗರ್ಭಿಣಿ-ಬಾಣಂತಿ ಮಹಿಳೆಯರ ಪೂರಕ ಪೌಷ್ಠಿಕ ಆಹಾರ ಮತ್ತು ಆರೋಗ್ಯದ ಬಗ್ಗೆ ಕಾಳಜಿ ವಹಿಸಿ, ರಾಜ್ಯದ ಬಡ ಮಹಿಳಾ ಮತ್ತು ಮಕ್ಕಳ ರಕ್ಷಣೆಯಲ್ಲಿ ಮಹತ್ತರವಾದ ಪಾತ್ರವನ್ನು ವಹಿಸುತ್ತಿರುತ್ತಾರೆ.

ಅಂಗನವಾಡಿ ಕಾರ್ಯಕರ್ತರು ಹಾಗೂ ಸಹಾಯಕರುಗಳಿಗೆ ಸರ್ಕಾರವು ಹೆಚ್ಚಿನ ಪ್ರೋತ್ಸಾಹವನ್ನು ನೀಡುವ ಬದಲಿಗೆ ಇವರಿಗೆ ಕನಿಷ್ಠ ಪ್ರಮಾಣದ ಗೌರವ ಧನವನ್ನು ನೀಡುತ್ತಿದೆ. ಈ ಅಂಗನವಾಡಿ ಉದ್ಯೋಗಿಗಳಿಗೆ ಸರ್ಕಾರವು ಸಾಮಾಜಿಕ, ಆರ್ಥಿಕ ಮತ್ತು ಔದ್ಯಮಿಕ ಭದ್ರತೆಯನ್ನು ಒದಗಿಸುವ ಕಾಳಜಿ ತೋರದ ಕೇವಲ ದುಡಿಮೆಗಾಗಿ ಬಳಕೆಯ ವಸ್ತುಗಳಂತೆ ವ್ಯವಹರಿಸುತ್ತಿರುವುದು ಶೋಷಣಾತ್ಮಕ ಧೋರಣೆಯಾಗಿದೆ. ಈ ನೌಕರಿಗೆ ಸಾಮಾಜಿಕ ಸುರಕ್ಷ ಯೋಜನೆಯಾದ ಇ.ಎಸ್.ಐ. ಸೌಲಭ್ಯ ಹಾಗೂ ಸರ್ಕಾರಿ ನೌಕರರಿಗೆ ರೂಪಿಸಿರುವ ನೌಕರ ಸ್ನೇಹಿ ಉಚಿತ ವೈದ್ಯಕೀಯ ಯೋಜನೆಯನ್ನು ಇವರಿಗೂ ಸಹಾ ವಿಸ್ತರಿಸದೇ ವಿಚಾರವು ಗಂಭೀರವಾಗಿದೆ. ನಿಸ್ವಾರ್ಥತೆ ಮತ್ತು ಸೇವಾ ಮನೋಭಾವದಿಂದ ದುಡಿಯುತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಸಮಸ್ಯೆಯನ್ನು ಚರ್ಚಿಸಿ ಸೂಕ್ತ ಪರಿಹಾರವನ್ನು ಒದಗಿಸುವ ವಿಚಾರ.

** ** **

ಉತ್ತರ

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದೆ. ಈ ಯೋಜನೆಯು 1975ರಿಂದ ಜಾರಿಗೆ ಬಂದಿರುತ್ತದೆ. 204 ಶಿಶು ಅಭಿವೃದ್ಧಿ ಯೋಜನೆಗಳ ಮೂಲಕ 66361 ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಈ ಯೋಜನೆಯಡಿ 64,729 ಅಂಗನವಾಡಿ ಕಾರ್ಯಕರ್ತೆಯರು ಮತ್ತು 59,627 ಅಂಗನವಾಡಿ ಸಹಾಯಕಿಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.10,000/-, ಸಹಾಯಕಿಯರಿಗೆ ರೂ.5250/- ಮತ್ತು ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.6250/-ಗಳ ಗೌರವಧನವನ್ನು ದಿನಾಂಕ:31.03.2022 ರವರೆಗೆ ಪಾವತಿಸಲಾಗುತ್ತಿದ್ದು. 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ಸೇವಾ ಹಿರಿತನದ ಆಧಾರದ ಮೇಲೆ 20 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ ರೂ.1500/-, 10 ವರ್ಷದಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ ರೂ.1250/- ಮತ್ತು 10 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿದವರಿಗೆ ರೂ.1000/-ಗಳ ಗೌರವಧನವನ್ನು ದಿನಾಂಕ: 01.04.2022 ರಿಂದ ಹೆಚ್ಚಿಸಲಾಗಿದೆ. ವಿವರ ಕೆಳಗಿನಂತಿದೆ:

(ರೂ. ಲಕ್ಷಗಳಲ್ಲಿ)

| ವಿವರ | ವಿಂಗಡನೆ | ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಗೌರವಧನ | ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ನೀಡುತ್ತಿರುವ ಗೌರವಧನ | ಒಟ್ಟು |
|---|---|---|---|---|
| ಅಂಗನವಾಡಿ ಕಾರ್ಯಕರ್ತೆ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 4500 | 6500 | 11000 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 6750 | 11250 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 7000 | 11500 |
| ಅಂಗನವಾಡಿ ಸಹಾಯಕಿ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 2500 | 3750 | 6250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 6500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 6750 |
| ಮಿನಿ ಅಂಗನವಾಡಿ ಕಾರ್ಯಕರ್ತೆ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 3500 | 3750 | 7250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 7500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 7750 |

ಇದಲ್ಲದೇ ಅಂಗನವಾಡಿ ಕಾರ್ಯಕರ್ತೆಯರಿಗೆ ಈ ಕೆಳಕಂಡ ಸೇವಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

1. ಅಂಗನವಾಡಿ ಕಾರ್ಯಕರ್ತೆಯರು/ ಸಹಾಯಕಿಯರು ಸೇವೆಯಲ್ಲಿರುವಾಗ ಮರಣ ಹೊಂದಿದಲ್ಲಿ ಅವರ ಕುಟುಂಬದ ಕಾನೂನುಬದ್ಧ ವಾರಸುದಾರರಿಗೆ ರೂ.50,000/- ನೀಡಲಾಗುತ್ತಿದೆ.
2. 2011 ರಿಂದ 2015ರವರೆಗೆ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ವಂತಿಕೆ ಆಧಾರಿತ ಪಿಂಚಣಿ ಯೋಜನೆಯಡಿ ನೋಂದಣಿಯಾದ 18-55 ವರ್ಷ ಅಂಗನವಾಡಿ ಕಾರ್ಯಕರ್ತೆ/ಅಂಗನವಾಡಿ ಸಹಾಯಕಿಯರಿಂದ ಕ್ರಮವಾಗಿ ರೂ.150/- ಹಾಗೂ ರೂ.84/- ಮಾಹೆಯಾನ ವಂತಿಗೆಯಲ್ಲಿ ಪಡೆದು ವಸೂಲಿ ಮಾಡಿ ಅಷ್ಟೇ ಮೊತ್ತದ ವಂತಿಗೆಯನ್ನು ಸರ್ಕಾರ ಭರಿಸುತ್ತದೆ.
3. ಎನ್.ಪಿ.ಎಸ್. ಲೈಟ್ ಯೋಜನೆಯಿಂದ ವಂಚಿತರಾಗಿ ನಿವೃತ್ತಿ ಹೊಂದಿದ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಅನುಕ್ರಮವಾಗಿ ರೂ.50,000/- ಮತ್ತು ರೂ.30,000/- ಗಳನ್ನು ಪಾವತಿಸಲಾಗುತ್ತಿದೆ.
4. ಅಂಗನವಾಡಿ ಕಾರ್ಯಕರ್ತೆಯರು ಮತ್ತು ಅಂಗನವಾಡಿ ಸಹಾಯಕಿಯರಿಗೆ ವೈದ್ಯಕೀಯ ಮರುಪಾವತಿ ಯೋಜನೆಯನ್ನು ಜಾರಿಗೊಳಿಸಿದ್ದು, ಗುರುತರ ಕಾಯಿಲೆಗಳಾದ ಹೃದ್ರೋಗ ಶಸ್ತ್ರ ಚಿಕಿತ್ಸೆ, ಕ್ಯಾನ್ಸರ್ , ಡಯಾಲಿಸಿಸ್ ಮತ್ತು ಮೂತ್ರಪಿಂಡ ಜೋಡಣೆ ಮತ್ತು ಗರ್ಭಕೋಶ ಸಂಬಂಧಪಟ್ಟ ಕಾಯಿಲೆಗಳಿಂದ ಬಳಲುತ್ತಿದ್ದಲ್ಲಿ ಗರಿಷ್ಠ ರೂ.50,000/-ಗಳ ವೈದ್ಯಕೀಯ ವೆಚ್ಚವನ್ನು ಮರುಪಾವತಿಸಲಾಗುತ್ತಿದೆ.

5. ಮಾತೃಪೂರ್ಣ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರಿಗೂ ಮಧ್ಯಾಹ್ನದ ಬಿಸಿಯೂಟವನ್ನೂ ಸಹ ಒದಗಿಸಲಾಗುತ್ತಿದೆ.
6. ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯಡಿ ಸೌಲಭ್ಯ ಪಡೆಯುವ ಫಲಾನುಭವಿಗಳ ಅರ್ಜಿಯನ್ನು ಆನ್ ಲೈನ್‌ನಲ್ಲಿ ಅಳವಡಿಸಿದಾಗ ಒಂದು ಅರ್ಜಿಗೆ ರೂ.50/- ನ್ನು ಹಾಗೂ 3 ಅರ್ಜಿಗಳನ್ನು ಅಳವಡಿಸಿದ ನಂತರ ಪ್ರತ್ಯೇಕವಾಗಿ ರೂ.50/- ಗಳು ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಗೆ ರೂ.200/- ಗಳು ಮತ್ತು ಅದೇ ರೀತಿ ಅಂಗನವಾಡಿ ಸಹಾಯಕರಿಗೆ ಫಲಾನುಭವಿಗಳ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಳವಡಿಸಿದಾಗ ಒಂದು ಅರ್ಜಿಗೆ ರೂ25/-ನ್ನು ಹಾಗೂ 3 ಅರ್ಜಿಗಳನ್ನು ಅಳವಡಿಸಿದ ನಂತರ ಪ್ರತ್ಯೇಕವಾಗಿ ರೂ.25/- ಗಳು ಸೇರಿದಂತೆ ಒಟ್ಟು ರೂ.100/- ರಂತೆ ಪ್ರೋತ್ಸಾಹಧನ ನೀಡಲಾಗುವುದು.
7. ಭಾಗ್ಯಲಕ್ಷ್ಮಿ ಯೋಜನೆಯಡಿ ಫಲಾನುಭವಿಯನ್ನು ಗುರುತಿಸಿ, ನೊಂದಾಯಿಸಿಕೊಳ್ಳುವ ಹಾಗೂ ಪ್ರಗತಿ ಪರಿಶೀಲನೆ ಮಾಡುವ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಹೆಯಾನ ರೂ. 25/-ಗಳ ಪ್ರೋತ್ಸಾಹ ಧನ ನೀಡಲಾಗುವುದು.

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಅಂಗನವಾಡಿ ಸಹಾಯಕಿಯರ ಸೇವೆಯು ಕೇಂದ್ರ ಪುರಸ್ಕೃತ ಯೋಜನೆಯಡಿಯಲ್ಲಿ ಗೌರವ ಸೇವೆಯಾಗಿರುವುದರಿಂದ ಮತ್ತು ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರನ್ನು ಕಾರ್ಮಿಕರೆಂದು ಪರಿಗಣಿಸದಿರುವುದರಿಂದ ಇವರಿಗೆ ESI ಸೌಲಭ್ಯಗಳನ್ನು ವಿಸ್ತರಿಸಲು ಅವಕಾಶವಿರುವುದಿಲ್ಲ ಹಾಗೂ ಕನಿಷ್ಠ ವೇತನ ಕಾಯ್ದೆ ಇವರಿಗೆ ಅನ್ವಯಿಸುವುದಿಲ್ಲ.

ಈ ಮೇಲೆ ವಿವರಿಸಿರುವಂತೆ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರಿಗೆ ಸೇವಾ ಸೌಲಭ್ಯಗಳನ್ನು ನೀಡುವುದರ ಜೊತೆಗೆ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಗೌರವಧನದ ಜೊತೆಗೆ ಹೆಚ್ಚುವರಿಯಾಗಿ ರಾಜ್ಯ ಸರ್ಕಾರದ ವತಿಯಿಂದ ಗೌರವಧನವನ್ನು ಪಾವತಿಸಲಾಗುತ್ತಿದೆ.

**ಸಂಖ್ಯೆ:ಮಮಇ 407 ಐಸಿಡಿ 2022**

Halappa

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು